# ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಆಲೂರು.

**ಸಿ.ಸಿ.ಸಂಖ್ಯೆಃ 420/24**

| | | |
|---|---|---|
| ಸಾಕ್ಷಿದಾರರ ಹೆಸರು | ಪ್ರದೀಪ್ | ಸಿ.ಡಬ್ಲ್ಯೂಃ 2 |
| ಗಂಡನ / ತಂದೆ ಹೆಸರು | ಸುರೇಶ | ಪಿ.ಡಬ್ಲ್ಯೂಃ 1 |
| ವಯಸ್ಸು | 38 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಶುಕ್ರವಾರಸಂತೆ | |

ಪ್ರಮಾಣ ವಚನ ಬೋಧಿಸಲಾಯಿತು.

ದಿಃ 04.06.2026

**ಮುಖ್ಯ ವಿಚಾರಣೆಃ ಸಸಅ ರಿಂದ**

ನ್ಯಾಯಾಲಯದ ಮುಂದಿರುವ ಆರೋಪಿ ಮತ್ತು ಚಾಸಾ 3 ರವರ ಪರಿಚಯ ಇರುವುದಿಲ್ಲ. ಮಹಜರ್, ಶೋಧನಾ ಸಮುಚ್ಚಿತ ವಾರೆಂಟ್, ಮಾದರಿ ಸೀಲಿನ ನಕಲಿನಲ್ಲಿ ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ 1 ರಿಂದ 3 ಎಂದು ಸಾಕ್ಷಿ ಸಹಿಯನ್ನು ನಿಪಿ 1ಎ ರಿಂದ 3ಎ ಎಂದು ಗುರುತಿಸಲಾಯಿತು. ನಿಪಿ 1 ರಿಂದ 3 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆಯಲಾಗಿದೆ ಗೊತ್ತಿರುವುದಿಲ್ಲ ಮತ್ತು ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

(ಈ ಸಂದರ್ಭದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅರವರಿಂದಃ**

ದಿ.19.12.2023 ರಂದು ಅಬಕಾರಿ ಪೊಲೀಸರು ನನ್ನನ್ನು ಮತ್ತು ಚಾಸಾ 3 ರವರು ಕರೆಸಿ ವಿಚಾರ ತಿಳಿಸಿ ಕೆ.ಹೊಸಕೋಟೆ ಹೋಬಳಿಯ ಅಂಜಳಗಿ ಗ್ರಾಮದ ಆರೋಪಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದು ಮಾಹಿತಿ ಬಂದ ಆಧಾರದ ಮೇಲೆ ಅದೇ ಗ್ರಾಮದ ಆರೋಪಿಯ ವಿನಯ ಪ್ರಾವಿಜನ್ ಸ್ಟೋರ್ ಬಳಿ ಹೋಗಿ ಶೋಧನಾ ಸಮುಚ್ಚಿತ ವಾರೆಂಟ್ ತಯಾರಿಸಿ ಅಂಗಶೋಧನೆ ಮಾಡಿಕೊಂಡು ಮಳಿಗೆಯ ಒಳಗೆ ಹೋದಾಗ ಒಂದು ಬಿಳಿ ಪ್ಲಾಸ್ಟಿಕ್ ಚೀಲದಲ್ಲಿ 90 ಎಂ.ಎಲ್.ನ 30 ಒರಿಜಿನಲ್ ಚಾಯ್ಸ್ ವಿಸ್ಕಿಯ ಟೆಟ್ರಾ ಪ್ಯಾಕ್ಗಳು ದೊರಕಿದ್ದು ಅವುಗಳನ್ನು ಪರವಾನಗಿ ಇಲ್ಲದಿರುವುದರಿಂದ ಬಿಳಿ ಬಟ್ಟೆಯಲ್ಲಿ ಸುತ್ತಿ ಸಂಜೆ 6 ರಿಂದ 7 ರವರೆಗೂ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ನಿಪಿ 4 ರ ಬಗ್ಗೆ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಮು.ಮಾ.ನ್ನು ನೋಡಿ ಗುರುತಿಲಾಗುವುದಿಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಆಲೂರು.